ಮೈಸೂರ ಗೆಜೆಟ್ಟ

ಸರ್ಕಾರದಿಂದ ಫಾಯಿಷ ಆದ್ದು.

ಬೆಂಗಳೂರು, ಶನಿವಾರ, ಅಕ್ಟೋಬರ್ ತಾ॥ 10, ಸ್ರ್ 1885.

ಸೂ॥ ಈ ಭಾಗವನ್ನು ಪ್ರತ್ಯೇಕ ಸೇರಿಸಿ ಇಡುವ ಬಗ್ಗೆ ಇದಕ್ಕೆ ಬೇರೆಯಾಗಿ ಪುಟ ಸಂಖ್ಯೆ ಕೊಡಲ್ಪಡುತ್ತೆ.

3ನೇ ಭಾಗ.

ಇಂಡ್ಯಗವರ್ನಮೆಂಟ್, ರೆಸಿಡೆಂಟರು, ಚೀಫ್ ಜಡ್ಜ್‌ರುವಗ್ಯೆರೇರಿಂದ ಇಸ್ತಿಹಾರ್‌ನಾಮೆಗಳು.

ಮೈಸೂರು ಶೀಮೆ ಚೀಫ್ ಕೋರ್ಟ್‌ನಲ್ಲಿ.

1885ನೇ ಇಸವಿ ಅರ್ಜೀ ನಂಬರ್ 109.

ಮೈತಪಟ್ಟ ಪಾವಗಡ ತಾಲ್ಲೂಕು ವ್ಯಷ್ಟಿ ಅಮಲ್‌ದಾರ್ರು ನುಗ್ಗಿಪಳ್ಳಿ ಶಾಮಯ್ಯಂಗಾರ್ರ ಆಸ್ತೀ ವಿಷಯದಲ್ಲಿ—

ಅರ್ಜೀದಾರ ಗೋಪಾಲಯ್ಯಂಗಾರ್ರು ಮೃತಪಟ್ಟ ಸದರೀ ನುಗ್ಗಿಪಳ್ಳಿ ಶಾಮಯ್ಯಂಗಾರ್ರಿಗೆ ತಮ್ಮ ಮತ್ತು ಟ್ರಸ್ಟಿ ಆಗಬೇಕೆಂಬ ಸ್ಕ್ತದಾರಿ ಮೇಲೆ ನೆಲವಂಗಲ ತಾಲ್ಲೂಕು ಅಮಲ್‌ದಾರ್ರು ಗೋಪಾಲಯ್ಯಂಗಾರ್ರು ನೆಲವಂಗಲ ವಾಸಸ್ಥರಾಗಿ ಮೃತಪಟ್ಟ ಶಾಮಯ್ಯಂಗಾರ್ರ ಜೆಂದಗಿ ಬಗ್ಯಾಗಿ ಬರತಕ್ಕ ಸಾಲಗಳನ್ನು ವಸೂಲ್ಮಾಡುವದಕ್ಕೆ 1860ನೇ ಇಸವಿ 27ನೇ ಆಕ್ಟ್ ಮೇರಿಗೆ ಸರಟಿಫಿಕೇಟ್ ಬ್ಯೆ ಈ ಕೋರ್ಟ್‌ಗೆ ಖಾಯಿಷ್ ಮಾಡಿರುತ್ತಾರೆ.

ಸದರೀ ದರಖಾಸ್ತುದಾರರಾದ ಗೋಪಾಲಯ್ಯಂಗಾರ್ರ ಅರ್ಜೀಯನ್ನು 1885ನೇ ಇಸವಿ ನವಂಬರ್ ತಿಂಗಳು ತಾರೀಖು 3ನೇ ಮಂಗಳವಾದಲ್ಲು ಬೆಂಗಳೂರುಮೊಕ್ಕಾಮಿನಲ್ಲಿಕೇಳಿ ಸರಟಿಫಿಕೇಟ್ ಪಡಿಯತಕ್ಕ ಬಾಧ್ಯತೆಯು ವಿಮರ್ಶೆಮಾಡಲ್ಪಟ್ಟುತ್ತೆ. ಆ ಕಾಲದಲ್ಲಿ ಸದರೀ ಮೃತಪಟ್ಟ ಶಾಮಯ್ಯಂಗಾರ್ರ ಆಸ್ತಿಗೆ ಹಕ್ಕುದಾರರಾದ ವಿಶಿಷ್ಟರೂ ಈ ಕೋರ್ಟ್‌ನಲ್ಲಿ ಹಾಜರ್ ಇರಬೇಕೆಂದು ಇದರಿಂದ ತಿಳಿಯಪಡಿಸಿ ಇದೆ.

1885ನೇ ಇಸವಿ ಸೆಪ್ಟಂಬರ್ ತಿಂಗಳು 30ನೇ ತಾರೀಖಿನಲ್ಲಿ ಕೋರ್ಟ್ ಮೊಹರ್‌ನಿ ನಮ್ಮ ದಸ್ತಖತ್ತೊಡನೆ ಕೊಡೋಣಾಗಿದೆ.

ಹುಕ್ಕುಂ ಬಮೋಜೀಬ್,
ಎಸ್. ಹೇಮಾಜಿರಾವ್,
ರಜಿಸ್ಟ್ರರ್.

ಫಿನ್ಯಾನ್ಷಿಯಲ್ ಇಲಾಖೆ.

1882ನೇ ಇಸವಿಯ ಮೈಸೂರು ರೆಯಿಲ್‌ವೇ ಲೋನ್.

ತಾರೀಖು 6ನೇ ಜುಲೈ 1883.

ಲಂಡನ್‌ನಲ್ಲಿ ಬಡ್ಡೀ ಸಲ್ಲತಕ್ಕ ಬಗ್ಯೆ, ಷರಾ ಬರೆಯಲ್ಪಟ್ಟಬಹುದಾದಂತಾ ಸದರೀ ನೂಲದ ಡಿಬೆಂಚರ್‌ಗಳ ಮೇಲೆ ಲಂಡನ್‌ನಲ್ಲಿ, ಸ್ಟ್ರಾಂಡ್ ಬೀದಿ 59ನೇ ನಂಬರ್ ಕಟ್ಟಡದಲ್ಲಿರುವ ಬ್ಯಾಂಕರ್‌ಗಳಾದ ಮೆಸ್ಸರ್ಸ್ ಕಾಟ್ಸ್ ಅಂಡ್‌ಕೋ ಯವರು ಬಡ್ಡೀಯನ್ನು ಪಾವತೀ ಮಾಡುವ ಬಗ್ಯೆ ಅವರುಗಳೊಡನೆ ಮೈಸೂರು ಗವರ್ನಮೆಂಟಿನವರು ಯೇರ್ಪಾಡು ಮಾಡಿಕೊಂಡಿರುವದರಿಂದ ಲಂಡನ್‌ನಲ್ಲಿ ತಮ್ಮ ಡಿಬೆಂಚರ್‌ಗಳಿಗೆ ಬಡ್ಡೀಯನ್ನು